ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ
"ಸಾರಿಗೆ ಭವನ" ಕೇಂದ್ರ ಕಛೇರಿ,
ಕೆ.ಹೆಚ್.ರಸ್ತೆ, ಶಾಂತಿನಗರ, ಬೆಂಗಳೂರು-560 027. ಭಾರತ
ದೂರವಾಣಿ : 080-22221321 / 22221325
ವೆಬ್-ಸೈಟ್ : www.ksrtc.in

Karnataka State Road Transport Corporation
"Transport House" Central Offices,
K.H.Road, Shanthinagar, Bangalore-560 027. India
Tel : 080-22221321 / 25
Website : www.ksrtc.in

ಸಂ.ಕರಾಸ:ಕೇಕ:ಆಡಳಿತ:ಸೇನಿ: 253 :2019-20 ದಿನಾಂಕ: 17/18-12-2019

## ಸುತ್ತೋಲೆ ಸಂಖ್ಯೆ : 1662

ವಿಷಯ: ಗಣ್ಯ ವ್ಯಕ್ತಿಗಳ ಬಗ್ಗೆ ಹಾಗೂ ನಿಗಮದ ಘನತೆಗೆ ಧಕ್ಕೆತರುವಂತಹ ಹೇಳಿಕೆಗಳನ್ನು ದಿನಪತ್ರಿಕೆ/ಸಾಮಾಜಿಕ ಜಾಲತಾಣದಲ್ಲಿ ಪ್ರದರ್ಶಿಸದಿರುವ ಬಗ್ಗೆ ನಿರ್ದೇಶನಗಳು.

ಉಲ್ಲೇಖ:1) ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 141 ಇಅಸು 89 ದಿನಾಂಕ:14.12.1989.
2) ದಿನಾಂಕ:11.11.2019 ರ ಇಲಾಖಾ ಮುಖ್ಯಸ್ಥರ ಸಭೆಯ ನಡಾವಳಿ.

-----

ನಿಗಮದಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರು/ಅಧಿಕಾರಿಗಳು ಗಣ್ಯ ವ್ಯಕ್ತಿಗಳನ್ನು ಅವಹೇಳನಕಾರಿಯಾಗಿ ಟೀಕಿಸುವುದು ಹಾಗೂ ನಿಗಮದ ಘನತೆಗೆ ಧಕ್ಕೆ ತರುವಂತಹ ಮಾತುಗಳನ್ನು ಚಿತ್ರೀಕರಿಸಿ ಸಾರ್ವಜನಿಕ ಮಾಧ್ಯಮಗಳಲ್ಲಿ/ಸಾಮಾಜಿಕ ಜಾಲತಾಣಗಳಲ್ಲಿ ಪ್ರದರ್ಶಿಸುವುದು ಹಾಗೂ ಹೇಳಿಕೆಗಳನ್ನು ನೀಡುತ್ತಿರುವುದು ಕಂಡುಬಂದಿದ್ದು, ಇದು ಆತಂಕಕಾರಿಯಾಗಿದೆ.

ಈ ಹಿನ್ನೆಲೆಯಲ್ಲಿ, ನಿಗಮದಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರು/ಅಧಿಕಾರಿಗಳು ಗಣ್ಯ ವ್ಯಕ್ತಿಗಳನ್ನು ಅವಹೇಳನಕಾರಿಯಾಗಿ ಟೀಕಿಸುವುದು ಹಾಗೂ ನಿಗಮದ ಘನತೆಗೆ ಧಕ್ಕೆ ತರುವಂತಹ ಮಾತುಗಳನ್ನು ಚಿತ್ರೀಕರಿಸಿ ಸಾರ್ವಜನಿಕ ಮಾಧ್ಯಮಗಳಲ್ಲಿ/ ಸಾಮಾಜಿಕ ಜಾಲತಾಣಗಳಲ್ಲಿ ಪ್ರದರ್ಶಿಸುವ ಕುರಿತು, ಗಂಭೀರವಾಗಿ ಪರಿಗಣಿಸಲಾಗಿದೆ.

ನಿಗಮದ ಅಧಿಕಾರಿ/ನೌಕರರ ಕುಂದುಕೊರತೆಗಳ ನಿವಾರಣೆ ಬಗ್ಗೆ ಸಂಬಂಧಪಟ್ಟ ಮೇಲಾಧಿಕಾರಿಗಳ ಗಮನಕ್ಕೆ ತಂದು ನಿಯಮಾನುಸಾರ ಸೂಕ್ತ ವೇದಿಕೆಯಲ್ಲಿ/ವಿಭಾಗದ ಕಾರ್ಮಿಕ ಮತ್ತು ಕಲ್ಯಾಣಾಧಿಕಾರಿಯವರಲ್ಲಿ ಬಗೆಹರಿಸಿಕೊಳ್ಳುವುದು. ಸಂಬಂಧಪಟ್ಟವರೆಲ್ಲರೂ ಮೇಲಿನ ಅಂಶಗಳನ್ನು ಮನದಟ್ಟು ಮಾಡಿಕೊಂಡು ಅದರಂತೆ ಕ್ರಮ ಕೈಗೊಳ್ಳತಕ್ಕದ್ದು. ತಪ್ಪಿದಲ್ಲಿ ವಿಷಯವನ್ನು ಗಂಭೀರವಾಗಿ ಪರಿಗಣಿಸಿ ಸೂಕ್ತ ಶಿಸ್ತಿನ ಕ್ರಮ ಜರುಗಿಸಲಾಗುವುದು. ಈ ಸುತ್ತೋಲೆಯು ತಕ್ಷಣದಿಂದ ಜಾರಿಗೆ ಬಂದಿರುತ್ತದೆ.

(ಶಿವಯೋಗಿ ಸಿ. ಕಳಸದ, ಭಾ.ಆ.ಸೇ.,)
ವ್ಯವಸ್ಥಾಪಕ ನಿರ್ದೇಶಕರು

## ಈಶಾನ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ : ಕೇಂದ್ರ ಕಛೇರಿ : ಕಲಬುರಗಿ

ಸಂ:ಈಕರಸಾ/ಕೇಕ/ಸಿಬ್ಬಂದಿ/ಆಡಳಿತ/ಆ4/2185/2019 ದಿನಾಂಕ: 24 /12/2019.

**"ಕರಾರಸಾ ನಿಗಮದಿಂದ ಹೊರಡಿಸಲಾದ ಸುತ್ತೋಲೆ ಸಂಖ್ಯೆ 1662 ದಿನಾಂಕ:18/12/2019 ನ್ನು ಈಕರಸಾ ಸಂಸ್ಥೆಯಲ್ಲಿ ಯಥಾವತ್ತಾಗಿ ಅಳವಡಿಸಿಕೊಳ್ಳಲು ಮಾನ್ಯ ವ್ಯವಸ್ಥಾಪಕ ನಿರ್ದೇಶಕ ರವರು ಆದೇಶಿಸಿರುತ್ತಾರೆ" ಸಂಬಂಧಪಟ್ಟವರು ಸದರಿ ಸುತ್ತೋಲೆಯಲ್ಲಿನ ನಿರ್ದೇಶನಗಳನ್ನು ಪಾಲಿಸಲು ಕೋರಲಾಗಿದೆ.**

23/12/19
ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು

ಪ್ರತಿಯನ್ನು:-

- ✓ ಎಲ್ಲಾ ಇಲಾಖಾ ಮುಖ್ಯಸ್ಥರು /ವಿಭಾಗೀಯ ನಿಯಂತ್ರಣಾಧಿಕಾರಿಗಳು /ಕಾರ್ಯವ್ಯವಸ್ಥಾಪಕರು / ಕಾರ್ಯನಿರ್ವಾಹಕ ಅಭಿಯಂತರರು ಮತ್ತು ಪ್ರಾಂಶುಪಾಲರು, ಈಕರಸಾ ಸಂಸ್ಥೆ ರವರ ಮಾಹಿತಿಗಾಗಿ.
- ✓ ಮಾನ್ಯ ವ್ಯವಸ್ಥಾಪಕ ನಿರ್ದೇಶಕರು ರವರ ಆಪ್ತ ಕಾರ್ಯದರ್ಶಿ, ಈಕರಸಾ ಸಂಸ್ಥೆ, ಕೇಂದ್ರ ಕಛೇರಿ, ಕಲಬುರಗಿ ರವರ ಮಾಹಿತಿಗಾಗಿ.